**S.C.No.121/2019**
**P.W.-3**
**C.W.-3**

**ದಿನಾಂಕಃ 19.08.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀಸವಾಲುಃ 1 ನೇ ಆರೋಪಿ ಪರ ವಕೀಲರಿಂದಃ –**

2. ನಾನು ಒಂದು ಮಹಜರ್ ಗೆ ಸಹಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಏನು ಬರವಣಿಗೆ ಅಗಿತ್ತು ಎಂದರೆ ಸಾಕ್ಷಿಯೂ ನಾನು ಅದನ್ನು ಒದಿರುವುದಿಲ್ಲ, ಆದರೆ ವಸ್ತುಗಳನ್ನು ತೆಗೆದುಕೊಂಡಾಗ ನಾನು ಸಹಿ ಮಾಡಿರುತ್ತೇನೆ. ಸದರಿ ವಸ್ತುಗಳನ್ನು ಪೊಲೀಸರು ಪಡೆದುಕೊಂಡಿರುತ್ತಾರೆ. ಸದರಿ ವಸ್ತುಗಳನ್ನು ಕವರ್ ನಲ್ಲಿ ಹಾಕಿಕೊಂಡು ಪಡೆದುಕೊಂಡಿರುತ್ತಾರೆ. ಆಟೋದ ಗಾಜನ್ನು ಕೂಡ ಪ್ಲಾಸ್ಟಿಕ್ ಕವರ್ ನಲ್ಲಿ ಪಡೆದುಕೊಂಡಿರುತ್ತಾರೆ. ಚಾಸಾ.1, 2, 4 ಮತ್ತು 5 ರವರು ನನಗೆ ಪರಿಚಯ ಇರುವ ಕಾರಣ, ಅವರುಗಳಿಗೆ ಸಹಾಯ ಮಾಡುವ ಸಲುವಾಗಿ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪೋಲಿಸೀರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ ಮತ್ತು ಸ್ಥಳ ಮಹಜರ್ ಜರುಗಿಸಿರುವುದಿಲ್ಲ ಮತ್ತು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ 2 ರಿಂದ 4 ನೇ ಆರೋಪಿ ಪರ ವಕೀಲರಿಂದಃ –**ಮೇಲಿನ ಪಾಟಿ ಸವಾಲನ್ನೇ ಅಳವಡಿಸಿಕೊಳ್ಳಲಾಗಿದೆ ಎಂದು ನುಡಿಯುತ್ತಾರೆ.

**ಪಾಟೀಸವಾಲುಃ 5 ನೇ ಆರೋಪಿ ಪರ ವಕೀಲರಿಂದಃ –** 5 ನೇ ಆರೋಪಿ ಪರ ವಕೀಲರು ಗೈರು ಹಾಜರಿದ್ದು , ಪಾಟಿ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ ಇಲ್ಲಾ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಎ ಒ

**S.C.No.121/2019**
**P.W.-3**
**C.W.-3**

3 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು.